# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 899

ಉತ್ತರ ದಿನಾಂಕ : 18.12.2018

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರದ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಗ್ರಾಮಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಕಾರ್ಯಕ್ರಮದ (NRDWP) ಮಾರ್ಗಸೂಚಿಗಳನ್ವಯ ಗ್ರಾಮಗಳಲ್ಲಿನ ನೀರಿನ ಗುಣಮಟ್ಟದ ಸಮಸ್ಯೆ, ಶೇಕಡ 55 LPCD ಗಿಂತ ಕಡಿಮೆ ನೀರು ಒದಗಿಸುತ್ತಿರುವ ಹಾಗೂ ಜಲಮೂಲ ದೊರೆಯುವಂತಹ ಗ್ರಾಮಗಳನ್ನು ಆಯ್ಕೆ ಮಾಡಿ ನಂತರ ಪ್ರಾಥಮಿಕ ಯೋಜನಾ ವರದಿ (PSR) ಮತ್ತು ವಿಸ್ತೃತ ಯೋಜನಾ ವರದಿ (DSR) ಗಳನ್ನು ತಯಾರಿಸಿ ರಾಜ್ಯ ತಾಂತ್ರಿಕ ಸಂಸ್ಥೆಯ (STA) ಶಿಫಾರಸ್ಸು ಆಧರಿಸಿ ವಿವಿಧ ಇಲಾಖೆಗಳ ಮುಖ್ಯಸ್ಥರನ್ನೊಳಗೊಂಡ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆಯಲ್ಲಿ ಮಂಡಿಸಲಾಗುವುದು. SLSSC ಸಭೆಯಲ್ಲಿ ಅನುಮೋದನೆ ಪಡೆದ ನಂತರ ರೂ.10.00ಕೋಟಿ ಅಂದಾಜಿನ ಮಿತಿಯೊಳಗಿರುವ ಯೋಜನೆಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗುವುದು. ರೂ.10.00ಕೋಟಿಗೂ ಮಿಗಿಲಾದ ಅಂದಾಜು ಮೊತ್ತದ ಯೋಜನೆಗಳನ್ನು ಸಚಿವ ಸಂಪುಟದ ಒಪ್ಪಿಗೆಗಾಗಿ ಮಂಡಿಸಲಾಗುವುದು. |
| ಆ) | ಪ್ರಸಕ್ತ ಸರ್ಕಾರ ಅಸ್ತಿತ್ವಕ್ಕೆ ಬಂದಾಗಿನಿಂದ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು) | ಪ್ರಸಕ್ತ ಸರ್ಕಾರ ಅಸ್ತಿತ್ವಕ್ಕೆ ಬಂದಾಗಿನಿಂದ ಮೂರು ಯೋಜನೆಗಳನ್ನು ಕೈಗೊಳ್ಳಲಾಗಿದೆ. (1) ಹಾಸನ ಜಿಲ್ಲೆ ಹಾಸನ ತಾಲ್ಲೂಕಿನ ಶಾಂತಿಗ್ರಾಮ ಮತ್ತು ಇತರೆ 195 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆ (2) ಚಾಮರಾಜನಗರ ಜಿಲ್ಲೆ ಕೊಳ್ಳೆಗಾಲ ತಾಲ್ಲೂಕಿನ ಟಗರಾಪುರ ಮತ್ತು ಇತರೆ 19 ಗ್ರಾಮಗಳ ಹಾಗೂ ಯಳಂದೂರು ತಾಲ್ಲೂಕಿನ 45 ಗ್ರಾಮಗಳ (ಒಟ್ಟು 65 ಗ್ರಾಮಗಳು) ಕುಡಿಯುವ ನೀರು ಸರಬರಾಜು ಯೋಜನೆ ಮತ್ತು (3) ರಾಯಚೂರು ಜಿಲ್ಲೆ, ಲಿಂಗಸುಗೂರು ತಾಲ್ಲೂಕಿನ ಯಲಗಟ್ಟ ಮತ್ತು ಇತರೆ 10 ಗ್ರಾಮಗಳ ಕುಡಿಯುವ ನೀರು ಪೂರೈಸುವ ಯೋಜನೆ. ಈ ಮೂರು ಯೋಜನೆಗಳಲ್ಲಿ ಒಟ್ಟು 272 ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ. |

| | | |
|---|---|---|
| ಇ) | ಆಯ್ಕೆ ಮಾಡಿದ ಯಾವ ಯಾವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಗ್ರಾಮಗಳಿಗೆ ಅನುದಾನ ಬಿಡುಗಡೆ ಮಾಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ಯೋಜನಾವಾರು ಬಿಡುಗಡೆ ಮಾಡಿರುವ ಅನುದಾನದ ಸಂಪೂರ್ಣ ಮಾಹಿತಿ ನೀಡುವುದು) | ಹಾಸನ ಜಿಲ್ಲೆ ಹಾಸನ ತಾಲ್ಲೂಕಿನ ಶಾಂತಿಗ್ರಾಮ ಮತ್ತು ಇತರೆ 195 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಯು ಟೆಂಡರ್ ಪ್ರಕ್ರಿಯೆ ಹಂತದಲ್ಲಿದೆ. ಚಾಮರಾಜನಗರ ಜಿಲ್ಲೆ ಕೊಳ್ಳೆಗಾಲ ತಾಲ್ಲೂಕಿನ ಟಗರಾಪುರ ಮತ್ತು ಇತರೆ 19 ಗ್ರಾಮಗಳ ಹಾಗೂ ಯಳಂದೂರು ತಾಲ್ಲೂಕಿನ 45 ಗ್ರಾಮಗಳ ಕುಡಿಯುವ ನೀರಿನ ಯೋಜನೆ ಮತ್ತು ರಾಯಚೂರು ಜಿಲ್ಲೆ, ಲಿಂಗಸುಗೂರು ತಾಲ್ಲೂಕಿನ ಯಲಗಟ್ಟ ಮತ್ತು ಇತರೆ 10 ಗ್ರಾಮಗಳ ಕುಡಿಯುವ ನೀರು ಪೂರೈಸುವ ಯೋಜನೆಗಳು ತಾಂತ್ರಿಕ ಮಂಜೂರಾತಿ ಹಂತದಲ್ಲಿದೆ. |
| ಈ) | ಬಹುಗ್ರಾಮ ಕುಡಿಯುವ ನೀರಿನ ಯೋಜನೆಯು ಯಾವ ಯಾವ ಗ್ರಾಮಗಳಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡದೇ ಬಾಕಿ ಉಳಿಸಿಕೊಳ್ಳಲಾಗಿದೆ; ಇದಕ್ಕೆ ಕಾರಣಗಳೇನು? (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಈಗಾಗಲೇ ಪೂರ್ಣಗೊಂಡು ಕಾರ್ಯಗತಗೊಳಿಸಲಾಗಿರುವ, ಪ್ರಗತಿಯಲ್ಲಿರುವ ಹಾಗೂ ವಿವಿಧ ಹಂತದಲ್ಲಿರುವ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳು 11,946 ಜನವಸತಿಗಳನ್ನು ಆವರಿಸಲ್ಪಟ್ಟಿದೆ. ಉಳಿದ ಗ್ರಾಮೀಣ ಜನವಸತಿಗಳಿಗೆ ಶುದ್ಧ ಕುಡಿಯುವ ನೀರು ಸೌಲಭ್ಯ ಕಲ್ಪಿಸುವ ಸಲುವಾಗಿ **"ಜಲಧಾರೆ"** ಕಾರ್ಯಕ್ರಮವನ್ನು ಚಾಲನೆಗೊಳಿಸುವ ಪ್ರಕ್ರಿಯೆ ಜಾರಿಯಲ್ಲಿದೆ. |

ಸಂ:ಗ್ರಾಅಪ 103 ಗ್ರಾನೀಸ(3)18

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು